**<u>ಸಾಕ್ಷಿಗೆ ದಿನಾಂಕ 04.12.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು: 1 ನೇ ಎದುರುದಾರರ ಪರ ಶ್ರೀ. ಕೆ ಆರ್ ಎಸ್ ವಕೀಲರಿಂದಃ</u>**

1. ನಾನು ಈ ಅಪಘಾತ ನೋಡಿಲ್ಲ ಎಂದರೆ ಸರಿ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ 2 ನೇ ಖಂಡಿಕೆಯಲ್ಲಿ ನಮೂದು ಮಾಡಿರುವ ವಾಹನದ ಬಗ್ಗೆ ಮಾಹಿತಿಯನ್ನು ಹೇಗೆ ಪಡೆದುಕೊಂಡಿದ್ದೀರಾ ಎಂದರೆ ಸಂಚಾರ ಪೊಲೀಸ್ ಠಾಣೆಯವರು ಸಿಸಿಟಿವಿ ದೃಶ್ಯಾವಳಿಗಳನ್ನು ನೋಡಿ ನಮಗೆ ಮಾಹಿತಿ ನೀಡಿರುತ್ತಾರೆ. ದೂರನ್ನು ನನ್ನ ಮೈದುನ ಕಾರ್ತಿಕ್ ನೀಡಿರುತ್ತಾರೆ. ದೂರಿನಲ್ಲಿ ಅಪಘಾತವು ಯಾವುದೋ ದ್ವಿಚಕ್ರ ವಾಹನದಿಂದ ಆಗಿದೆ ಎಂದು ನಮೂದಾಗಿದ್ದು ನಿರ್ದಿಷ್ಟವಾದ ವಾಹನದ ಸಂಖ್ಯೆ ನಮೂದಿಸಿಲ್ಲ ಎಂದರೆ ಸರಿ, ಸಾಕ್ಷಿ ಮುಂದುವರೆದು ಸಂಚಾರ ಪೊಲೀಸ್ ಠಾಣೆಯವರು ಸಿಸಿಟಿವಿ ದೃಶ್ಯಾವಳಿಗಳನ್ನು ನೋಡಿ ನಮಗೆ ಮಾಹಿತಿ ನೀಡಿದ ಮೇಲೆ ವಾಹನವನ್ನು ಸೇರಿಸಿರುತ್ತಾರೆ ಎಂದು ನುಡಿಯುತ್ತಾರೆ.

2. ಅಪಘಾತವಾದ ತಕ್ಷಣ ನನ್ನ ಪತಿಯನ್ನು ಬೌರಿಂಗ್ ಆಸ್ಪತ್ರೆಗೆ ಹೋಗಿದ್ದು, ತದನಂತರ ನಿಮಾನ್ಸ್ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ ಸದರಿ ಆಸ್ಪತ್ರೆಯಲ್ಲಿ ವೆಂಟಿಲೇಟರ್ ಸೌಲಭ್ಯವಿಲ್ಲದ ಕಾರಣ ಮಿಲ್ಲರ್ಸ್ ರಸ್ತೆ ಮಣಿಪಾಲ್ ಆಸ್ಪತ್ರೆ ಗೆ ದಾಖಲಿಸಿರುತ್ತೇವೆ. ಈ ಮೇಲೆ ತಿಳಿಸಿದ ಮೂರು ಆಸ್ಪತ್ರೆಗಳಲ್ಲಿ ಅಪಘಾತಪಡಿಸಿದ ವಾಹನದ ಬಗ್ಗೆ ಮಾಹಿತಿ ನೀಡಿರುವುದಿಲ್ಲ ಎಂದರೆ ಸರಿ. ಕೆಎ-03-ಇಪಿ-2440 ಎರಡನೇ ಎದುರುದಾರರ ವಾಹನ ನನ್ನ ಪತಿ ಸವಾರಿ ಮಾಡುತ್ತಿದ್ದ ದ್ವಿಚಕ್ರ ವಾಹನಕ್ಕೆ ಡಿಕ್ಕಿಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಪತಿ ತಾನು ಸವಾರಿ ಮಾಡುತ್ತಿದ್ದ ದ್ವಿಚಕ್ರ ವಾಹನದ ಮೇಲೆ ಸ್ವತಃ ಬಿದ್ದು ಗಾಯ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪೊಲೀಸರೊಂದಿಗೆ ಶಾಮೀಲಾಗಿ ಎರಡನೇ ಎದುರುದಾರರ ವಾಹನವನ್ನು ಸುಳ್ಳಾಗಿ ಸೇರಿಸಲಾಗಿದೆ ಎಂದರೆ ಸರಿಯಲ್ಲ.

3. ನನ್ನ ಪತಿಗೆ ಅಪಘಾತದಿಂದ ಸಣ್ಣ-ಪುಟ್ಟ ಗಾಯಗಳು ಆಗಿದ್ದು ಅವರ ಸಾವಿಗೆ ಅಪಘಾತದಿಂದಾದ ಗಾಯಗಳು ಕಾರಣವಲ್ಲ ಎಂದರೆ ಸರಿಯಲ್ಲ. ಅಪಘಾತವಾದ 4 ತಿಂಗಳುಗಳ ಕಾಲ ಒಳರೋಗಿಯಾಗಿ ಕೋಮಾದಲ್ಲಿ ಇದ್ದರು. ಅಪಘಾತವಾದ ಒಂದು ವರ್ಷ ಐದು ತಿಂಗಳ ನಂತರ ನನ್ನ ಪತಿ ಮರಣ ತೀರಿಹೋಗಿರುತ್ತಾರೆ ಎಂದರೆ ಸರಿ. ನನ್ನ ಪತಿಯ ವೈದ್ಯಕೀಯಕ್ಕೆ ರೂ.21,00,000/- ಖರ್ಚಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವೈದ್ಯಕೀಯ ಬಿಲ್ಲುಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸುತ್ತಿದ್ದೇನೆ ಎಂದರೆ ಸರಿಯಲ್ಲ.

4. ನಾನು ಕಾರ್ಪೋರೇಟ್ ಗಿಫ್ಟಿಂಗ್ ನಲ್ಲಿ ಸೇಲ್ಸ್ ಕೋ-ಅರ್ಡಿನೇಟರ್ ಆಗಿ ಕೆಲಸ ಮಾಡುತ್ತಿದ್ದೇನೆ. ನನಗೆ ತಿಂಗಳಿಗೆ ರೂ.30,000/- ಸಂಬಳ ಬರುತ್ತಿದೆ. ನಾನು ಕಳೆದ 7 ವರ್ಷಗಳಿಂದ ಕೆಲಸ ಮಾಡುತ್ತಿದ್ದೇನೆ. ನಾನು ನನ್ನ ಪ್ರತ್ಯೇಕ ಆದಾಯ ಹೊಂದಿದ್ದರಿಂದ ನನ್ನ ಮೃತ ಪತಿಯ ಆದಾಯದ ಮೇಲೆ ಅವಲಂಬಿತಳಾಗಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಪತಿ ಷಾಂಗ್ರಿಲಾ ಹೋಟೇಲ್ ಚಾಲಕ ವೃತ್ತಿ ಮಾಡಿ ತಿಂಗಳಿಗೆ ರೂ.24,755/- ಸಂಪಾದಿಸುತ್ತಿರಲಿಲ್ಲ ಎಂದರೆ ಸರಿಯಲ್ಲ. ನಿಪಿ.24-27 ಸೃಷ್ಟಿತ ದಾಖಲೆಗಳು ಎಂದರೆ ಸರಿಯಲ್ಲ. ನನ್ನ ಪತಿಯ ಉದ್ಯೋಗದಾತರ ಸಾಕ್ಷ್ಯ ಮಾಡಿಸಲು ತೊಂದರೆ ಇರುವುದಿಲ್ಲ ಎಂದರೆ ಸರಿ. ಸಂಚಾರ ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಆಧಾರಿಸಿ ಎರಡನೇ ಎದುರುದಾರರ ವಾಹನವನ್ನು ಪತ್ತೆ ಮಾಡಿರುತ್ತಾರೆ ಎಂದು ಹೇಳಿದ್ದು ಸದರಿ ದೃಶ್ಯಾವಳಿಗಳನ್ನು ಹಾಜರುಪಡಿಸುತ್ತೀರಾ ಎಂದರೆ ಹಾಜರುಪಡಿಸುತ್ತೇನೆ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ಪೊಲೀಸರೊಂದಿಗೆ ಶಾಮೀಲಾಗಿ ಎರಡನೇ ಎದುರುದಾರರ ವಾಹವನ್ನು ಸುಳ್ಳಾಗಿ ಸೇರಿಸಿ, ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಎರಡನೇ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಲ್ಪಿಸಲಾಯಿತು.

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**